**Akashvani : Bangalore**
**Regional Bulletin In Kannada**
**15.04.2024 / 13.50 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.04.2024 / 13.50 hrs**

**<><*<><>*><>**

**ಮುಖ್ಯಾಂಶಗಳು**

೧. **ಲೋಕಸಭಾ ಚುನಾವಣೆ; ಬಿರುಸುಗೊಂಡ ಪ್ರಚಾರ; ವಿವಿಧ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ**

೨. **ಚುನಾವಣಾ ಆಯೋಗದಿಂದ ದಾಖಲೆ ಪ್ರಮಾಣದ ನಗದು, ವಸ್ತು ಜಪ್ತಿ**

೩. **ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದುವರೆದ ಮತದಾನ ಜಾಗೃತಿ ಜಾಥಾ**

೪. **ದೇಶದ ಪ್ರಗತಿಗೆ ಪ್ರಬಲ ನಾಯಕರ ಅಗತ್ಯವಿದೆ: ವಿದೇಶಾಂಗ ಸಚಿವ**

**<><*<><>*><>**

ರಾಜ್ಯದಲ್ಲಿ ಎರಡನೇ ಹಂತದಲ್ಲಿ ನಡೆಯಲಿರುವ ಲೋಕಸಭಾ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಇಂದು ನಾಮಪತ್ರ ಸಲ್ಲಿಸಿದರು. ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಸಂಸದರಾದ ಮಂಗಲ ಅಂಗಡಿ, ಮಾಜಿ ಸಚಿವ ರಮೇಶ್ ಜಾರಕಿಹೊಳಿ ಮತ್ತಿತರರು ಉಪಸ್ಥಿತರಿದ್ದರು. ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ತಮ್ಮ ನಾಮಪತ್ರ ಸಲ್ಲಿಸಿದರು.ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್, ಶಾಸಕರಾದ ಮಹಾಂತೇಶ್ ಕೌಜಲಗಿ, ರಾಜು ಕಾಗೇ ಮತ್ತಿತರರು ಉಪಸ್ಥಿತರಿದ್ದರು. ಬೆಳಗಾವಿ ಲೋಕಸಭಾ ಕ್ಷೇತ್ರದ ಕೆ.ಆರ್.ಎಸ್ ಪಕ್ಷದಿಂದ ಬಸಪ್ಪಾ ಗುರುಸಿದ್ದಪ್ಪ ಕುಂಬಾರ ನಾಮಪತ್ರ ಸಲ್ಲಿಸಿದರು. ಹಾವೇರಿ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಕಾಂಗ್ರೆಸ್ ಅಭ್ಯರ್ಥಿ ಜಿ.ಜಿ ಆನಂದಸ್ವಾಮಿ ಗಡ್ಡದೇವರಮಠ ಹಾಗೂ ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿಯಾಗಿ ಸಚಿನ್ ಕುಮಾರ ಕರ್ಜೆಕಣ್ಣನವರ್ ಉಮೇದುವಾರಿಕೆ ಸಲ್ಲಿಸಿದ್ದಾರೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿ ರಘುನಂದನ್ ಮೂರ್ತಿ ಮಾಹಿತಿ ನೀಡಿದ್ದಾರೆ.

**<><*<><>*><>**

೧೮ನೇ ಲೋಕಸಭೆಯ ಮೊದಲ ಹಂತದ ಚುನಾವಣೆಗೂ ಮುನ್ನಾವೇ ದೇಶಾದ್ಯಂತ ಚುನಾವಣಾ ಆಯೋಗ ೪ ಸಾವಿರದ ೬೫೦ ಕೋಟಿ ರೂಪಾಯಿ ಮೊತ್ತದ ನಗದು ಮತ್ತಿತರ ವಸ್ತುಗಳನ್ನು ವಶಪಡಿಸಿಕೊಂಡಿದೆ. ಇದು ದೇಶದ ೭೫ ವರ್ಷಗಳ ಚುನಾವಣಾ ಇತಿಹಾಸದಲ್ಲೇ ಅತ್ಯಂತ ಹೆಚ್ಚಿನದಾಗಿದೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ. ಕರ್ನಾಟಕದಲ್ಲಿ ಏಪ್ರಿಲ್ ೧೩ರವರೆಗೆ ೩೫ ಕೋಟಿ ೫೩ ಲಕ್ಷದ ೮೦ ಸಾವಿರದ ೭೦ ರೂಪಾಯಿ ನಗದು, ೧೮ ಕೋಟಿ ೭೫ ಲಕ್ಷಕ್ಕೂ ಹೆಚ್ಚು ಮೌಲ್ಯದ ಮಾದಕ ವಸ್ತು, ೬೦ ಕೋಟಿ ೮೬ ಲಕ್ಷ ಮೌಲ್ಯದ ಉಚಿತ ಕೊಡುಗೆಗಳು ಸೇರಿದಂತೆ ಒಟ್ಟಾರೆ ೨೮೧ ಕೋಟಿ ೪೩ ಲಕ್ಷ ರೂಪಾಯಿ ಮೌಲ್ಯದ ನಗದು ಹಾಗೂ ಮತ್ತಿತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಯೋಗ ತಿಳಿಸಿದೆ.

**<><*<><>*><>**

ಲೋಕಸಭಾ ಚುನಾವಣೆ ಅಂಗವಾಗಿ ನಾಡಿನ ವಿವಿಧೆಡೆ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಜಾಥಾ ಆಯೋಜನೆ ಮೂಲಕ ಮತದಾನ ಮಹತ್ವ ಕುರಿತು ಮತದಾರರಲ್ಲಿ ಅರಿವು ಮೂಡಿಸಲಾಗುತ್ತಿದೆ. ಯಾದಗಿರಿ ಜಿಲ್ಲೆ ಸುರಪುರದಲ್ಲಿ ಮತದಾನದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಸಹಾಯಕ ಚುನಾವಣಾ ಅಧಿಕಾರಿ

ಕಾವ್ಯಾರಾಣಿ, ಸದೃಢ ಪ್ರಜಾಪ್ರಭುತ್ವ ನಿರ್ಮಾಣದಲ್ಲಿ ಪ್ರತಿಯೊಬ್ಬ ಮತದಾರರು ಮತದಾನದಲ್ಲಿ ಪಾಲ್ಗೊಳ್ಳವುದು ಅಗತ್ಯವಿದೆ. ಎಲ್ಲರೂ ತಪ್ಪದೇ ತಮ್ಮ ಹಕ್ಕು ಚಲಾಯಿಸುವಂತೆ ಮನವಿ ಮಾಡಿದರು. ಸುರಪುರದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ವೃತದಿಂದ ಆರಂಭವಾದ ಜಾಥಾ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಹನುಮಾನ್ ವೃತ್ತದಲ್ಲಿ ಮುಕ್ತಾಯವಾಯಿತು.

**<><*<><>*><>**

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಏಪ್ರಿಲ್ ೨೬ ರಂದು ಮುಕ್ತ, ನ್ಯಾಯಸಮ್ಮತ, ನಿರ್ಭೀತ ಹಾಗೂ ಶಾಂತಿಯುತ ಚುನಾವಣೆ ನಡೆಸಲು ಸಕಲ ಸಿದ್ದತೆಗಳು ನಡೆಯುತ್ತಿವೆ ಎಂದು ಕ್ಷೇತ್ರದ ಚುನಾವಣಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿರುವ ಅವರು, ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ೦೮ ವಿಧಾನಸಭಾ ಕ್ಷೇತ್ರಗಳು ಬರಲಿದ್ದು, ಒಟ್ಟು ೧೯ ಲಕ್ಷದ ೬೬ ಸಾವಿರದ ೬೭ ಮತದಾರರಿದ್ದಾರೆ. ೩೭ ಚೆಕ್‌ಪೋಸ್ಟ್ ಗಳನ್ನು ತೆರೆಯಲಾಗಿದೆ ಎಂದರು.

**ಧ್ವನಿ: ರವೀಂದ್ರ**

**<><*<><>*><>**

ಭಾರತದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ವೀರ ಯೋಧರಿಗೆ ಪ್ರಥಮ ಬಾರಿಗೆ ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಮಾಡುವಂತೆ, ಈಗಾಗಲೇ ಅಂಚೆಪತ್ರ ಕಳುಹಿಸಲಾಗಿದೆ ಎಂದು ಕೋಲಾರ ಜಿಲ್ಲಾ ಚುನಾವಣಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಪ್ರತಿಯೊಬ್ಬರೂ ಪ್ರಜಾಪ್ರಭುತ್ವ ಹಬ್ಬದಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ ಎಂದು ತಿಳಿಸಿದರು.

**ಧ್ವನಿ: ಅಕ್ರಮ್ ಪಾಷ**

**<><*<><>*><>**

ದೇಶದ ಪ್ರಗತಿಗೆ ಜಾಗತಿಕ ಮನ್ನಣೆ ಪಡೆದಿರುವ ಪ್ರಬಲ ನಾಯಕರ ಅಗತ್ಯವಿದೆ ಎಂದು ಬಿಜೆಪಿ ಮುಖಂಡ ಹಾಗೂ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅಭಿಪ್ರಾಯಪಟಿದ್ದಾರೆ. ಬೆಂಗಳೂರಿನಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ದೃಢ ನಿರ್ಧಾರ ಕೈಗೊಳ್ಳುವ, ಉನ್ನತವಾಗಿ ಆಲೋಚಿಸುವ, ಜಾಗತಿಕವಾಗಿ ಗೌರವ ಪಡೆದಿರುವ ಹಾಗೂ ಬಡ, ಯುವ ಜನತೆಯ ಆಶೋತ್ತರ ಈಡೇರಿಸುವ ಅನುಭವಿ ನಾಯಕರಿಂದ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದರು. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಂತಹ ನಾಯಕರಿಂದ ದೇಶದ ಅಭಿವೃದ್ಧಿ ಸಾಧ್ಯ ಎಂದು ಅವರು ಹೇಳಿದರು.

**<><*<><>*><>**

ಈಗ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ವಿವರಗಳು :ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ ಸುರೇಶ್ ಡಿ. ಪಳ್ಳಿ ಪ್ರಜಾಪ್ರಭುತ್ವ ವ್ಯವಸ್ಥೆಯ ಬಹುದೊಡ್ಡ ಹಬ್ಬಕ್ಕೆ ದಿನಗಣನೆ ಆರಂಭವಾಗಿದೆ. ಕರಾವಳಿ ಪ್ರದೇಶ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಇದೇ ೨೬ರಂದು ಚುನಾವಣೆ ನಡೆಯಲಿದ್ದು, ಪ್ರಮುಖ ರಾಜಕೀಯ ಪಕ್ಷಗಳು ಬಿರುಸಿನಿಂದ ಪ್ರಚಾರದಲ್ಲಿ ತೊಡಗಿವೆ. ಎಂಟು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯನ್ನೊಳಗೊಂಡಿರುವ ಕ್ಷೇತ್ರದಲ್ಲಿ ಈ ಬಾರಿ ಒಂಭತ್ತು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ೧೭ ಲಕ್ಷದ ೯೬, ಸಾವಿರದ ೮೨೬ ಮತದಾರರಿದ್ದು, ೧೮೭೬ ಮತಗಟ್ಟೆಗಳನ್ನು ತೆರೆಯಲಾಗಿದೆ. ಎನ್‌ಡಿಎ ಅಭ್ಯರ್ಥಿಯಾಗಿ ಕ್ಯಾಪ್ಟನ್ ಬ್ರಿಜೇಶ್ ಚೌಟ, ಕಾಂಗ್ರೆಸ್ ಅಭ್ಯರ್ಥಿಯಾಗಿ ಆರ್.ಪದ್ಮರಾಜ್, ಬಹುಜನ ಸಮಾಜ ಪಾರ್ಟಿಯಿಂದ ಕಾಂತಪ್ಪ ಅಲಂಗಾರು, ಕರುನಾಡ ಸೇವಕರ ಪಕ್ಷದ ಅಭ್ಯರ್ಥಿ ದುರ್ಗಾ ಪ್ರಸಾದ್, ಉತ್ತಮ

ಪ್ರಜಾಕೀಯ ಪಕ್ಷದಿಂದ ಮನೋಹರ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ರಂಜಿನಿ ಎಂ. ಹಾಗೂ ಪಕ್ಷೇತರ ಅಭ್ಯರ್ಥಿಗಳಾಗಿ ದೀಪಕ್ ರಾಜೇಶ್ ಕುವೆಲ್ಲೊ, ಮೆಕ್ಸಿಂ ಪಿಂಟೊ, ಸುಪ್ರೀತ್ ಕುಮಾರ್ ಪೂಜಾರಿ ಅವರು ಅಂತಿಮ ಕಣದಲ್ಲಿದ್ದಾರೆ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ನೇರ ಪೈಪೋಟಿ ಇರುವ ಕ್ಷೇತ್ರದಲ್ಲಿ ಈ ಬಾರಿ ಎರಡೂ ಪಕ್ಷಗಳು ಹೊಸ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಈ ಹಿಂದೆ ಮಂಗಳೂರು ಕ್ಷೇತ್ರವಾಗಿದ್ದ ಈಗಿನ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ೧೯೫೧ರ ಬಳಿಕ ನಡೆದ ಚುನಾವಣೆಯಲ್ಲಿ ಸತತ ೯ ಬಾರಿ ಕಾಂಗ್ರೆಸ್ ಗೆಲುವು ಸಾಧಿಸಿದೆ. ೧೯೯೧ರ ಬಳಿಕ ಬಿಜೆಪಿ ಸತತ ೮ ಬಾರಿ ಜಯಗಳಿಸಿದೆ. ಕಳೆದ ೧೭ ಚುನಾವಣೆಗಳಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಹೊರತಾಗಿ ಅನ್ಯ ಪಕ್ಷಗಳಿಗೆ ಈ ಕ್ಷೇತ್ರದಿಂದ ಆಯ್ಕೆ ಸಾಧ್ಯವಾಗಿಲ್ಲ. ಕಾಂಗ್ರೆಸ್ ನಾಯಕ ಬಿ.ಜನಾರ್ದನ ಪೂಜಾರಿ ಮತ್ತು ಬಿಜೆಪಿಯ ವಿ.ಧನಂಜಯ ಕುಮಾರ್ ಸತತ ನಾಲ್ಕು ಬಾರಿ ಗೆಲುವು ಸಾಧಿಸುವ ಮೂಲಕ ಮಂಗಳೂರು ಲೋಕಸಭಾ ಕ್ಷೇತ್ರದಲ್ಲಿ ದಾಖಲೆ ನಿರ್ಮಿಸಿದ್ದಾರೆ. ಇವರಿಬ್ಬರು ಸಚಿವರಾಗಿಯೂ ಕಾರ್ಯ ನಿರ್ವಹಿಸಿದ್ದಾರೆ. ೨೦೦೯ರಿಂದ ೨೦೧೯ರವರೆಗೆ ನಡೆದ ಮೂರೂ ಲೋಕಸಭಾ ಚುನಾವಣೆಯಲ್ಲೂ ಬಿಜೆಪಿ ಅಭ್ಯರ್ಥಿ ನಳಿನ್ ಕುಮಾರ್ ಕಟೀಲ್ ಗೆಲುವು ಸಾಧಿಸುತ್ತಾ ಬಂದಿದ್ದರು. ೨೦೧೯ರ ಚುನಾವಣೆಯಲ್ಲಿ ನಳಿನ್ ಕುಮಾರ್ ಸಮೀಪದ ಸ್ಪರ್ಧಿ ಕಾಂಗ್ರೆಸ್‌ನ ಮಿಥುನ್ ರೈ ಅವರ ವಿರುದ್ಧ ೨ ಲಕ್ಷದ ೭೪ ಸಾವಿರ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು. ಈ ಬಾರಿ ಎರಡೂ ಪಕ್ಷಗಳು ಅಭ್ಯರ್ಥಿಗಳ ಬದಲಾವಣೆ ಮಾಡಿದ್ದು, ಹೊಸಬರಿಗೆ ಅವಕಾಶ ಕಲ್ಪಿಸಿದೆ. ಬಿಜೆಪಿ ಅಭ್ಯರ್ಥಿಯಾಗಿರುವ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಭಾರತೀಯ ಭೂಸೇನೆಯಲ್ಲಿ ಕ್ಯಾಪ್ಟನ್ ಆಗಿ ಸ್ವಯಂ ನಿವೃತ್ತಿ ಪಡೆದು ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಪ್ರತಿಷ್ಠಿತ ಎಂಟನೇ ಗೋರ್ಖಾ ರೈಫಲ್ಸ್ ೭ನೇ ಬೆಟಾಲಿಯನ್ನಲ್ಲಿ ಉತ್ತರ ಭಾರತ ಮತ್ತು ಈಶಾನ್ಯ ರಾಜ್ಯಗಳಲ್ಲಿ ಸೇವೆ ಸಲ್ಲಿಸಿದ್ದು, ನಿವೃತ್ತಿ ಪಡೆದ ಬಳಿಕ ಸಾಮಾಜಿಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. 'ಮಂಗಳೂರು ಕಂಬಳ' ಆಯೋಜನೆಯ ಮೂಲಕ ಗಮನಸೆಳೆದಿದ್ದರು. ಪ್ರಸ್ತುತ ಬಿಜೆಪಿ ರಾಜ್ಯ ಕಾರ್ಯದರ್ಶಿಯಾಗಿಯೂ ಬ್ರಿಜೇಶ್ ಚೌಟ ಕಾರ್ಯನಿರ್ವಹಿಸುತ್ತಿದ್ದಾರೆ. ಮತ್ತೊಂದೆಡೆ ವಕೀಲರಾಗಿರುವ ಆರ್.ಪದ್ಮರಾಜ್ ಅವರನ್ನು ಕಾಂಗ್ರೆಸ್ ಕಣಕ್ಕಿಳಿಸಿದೆ. ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರದ ಕೋಶಾಧಿಕಾರಿಯಾಗಿರುವ ಪದ್ಮರಾಜ್ ಅವರು ಸಮಾಜಮುಖಿ ಚಟುವಟಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಕಾನೂನು ಪದವೀಧರರಾಗಿರುವ ಇವರು ಕೇಂದ್ರದ ಮಾಜಿ ವಿತ್ತ ಸಚಿವ ಜನಾರ್ದನ ಪೂಜಾರಿಯವರೊಂದಿಗೆ ಮಾರ್ಗದರ್ಶನದಲ್ಲಿ ಬೆಳೆದು ಬಂದು ಈ ಬಾರಿ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರವನ್ನು ಕಾಂಗ್ರೆಸ್ ಅಭ್ಯರ್ಥಿಯಾಗಿ ಪ್ರತಿನಿಧಿಸುತ್ತಿದ್ದಾರೆ.

**<><*<><>*><>**

ಸಿರಿಪಾಡ್ದನದ ಮೂಲಕ ಖ್ಯಾತರಾದ ಪಾಡ್ದನ ಕಲಾವಿದೆ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ದಕ್ಷಿಣ ಕನ್ನಡ ಜಿಲ್ಲೆಯ ಗಿಡಿಗೆರೆ ರಾಮಕ್ಕ ಅವರಿಂದು ನಿಧನರಾದರು. ಅವರಿಗೆ ೧೦೨ ವರ್ಷ ವಯಸ್ಸಾಗಿತ್ತು.

**<><*<><>*><>**

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**